ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 159

ಸದಸ್ಯರ ಹೆಸರು : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 02.03.2020

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಸರ್ಕಾರಿ ಇಂಜಿನೀಯರಿಂಗ್ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಕಳೆದ ಎರಡು ವರ್ಷಗಳಿಂದ ವೇತನ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಆ)	ವಿದ್ಯುಚ್ಛಕ್ತಿ, ದೂರವಾಣಿ, ವಾಹನ, ಸೆಕ್ಯೂರಿಟಿಗೆ ಸಂಬಂಧಪಟ್ಟ ಅನುದಾನ ಕಳೆದ ಎರಡು ವರ್ಷಗಳಿಂದ ಬಿಡುಗಡೆಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಇ)	ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)	2019-20 ನೇ ಸಾಲಿಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅರೆಕಾಲಿಕ ಉಪನ್ಯಾಸಕರುಗಳ ಭತ್ಯೆ, ಸೆಕ್ಯುರಿಟಿ ಗಾರ್ಡ್‌ಗಳ ಭತ್ಯೆ, ವಿದ್ಯುತ್-ನೀರು-ದೂರವಾಣಿ ವೆಚ್ಚ, ಕಟ್ಟಡ ಬಾಡಿಗೆ ಹಾಗೂ ಕಛೇರಿ ವೆಚ್ಚಗಳನ್ನು ಭರಿಸಲು ಹೆಚ್ಚುವರಿ ಅನುದಾನವನ್ನು ಒದಗಿಸಲು ಆರ್ಥಿಕ ಇಲಾಖೆಯೊಂದಿಗೆ ವ್ಯವಹರಿಸಲಾಗುತ್ತಿದೆ.

ಕಡತ ಸಂಖ್ಯೆ: ಇಡಿ 23 ಹೆಚ್‌ಪಿಟಿ 2020

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉಪ ಮುಖ್ಯಮಂತ್ರಿಗಳು ಹಾಗೂ
ಉನ್ನತ ಶಿಕ್ಷಣ ಸಚಿವರು